# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1004 |
| ಸದಸ್ಯರ ಹೆಸರು | : | ಡಾ|| ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 27-12-2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರವು ) ಅಂಗನವಾಡಿ ಕಾರ್ಯಕರ್ತೆಯರಿಗೆ ಸರಿಯಾದ ಸಮಯಕ್ಕೆ ಸಂಬಳ ನೀಡದೆ ಮತ್ತು ಮೊಟ್ಟೆ ಹಾಗೂ ತರಕಾರಿಗೆ ಅನುದಾನ ನೀಡದೆ ಇರುವುದರಿಂದ ಅಂಗನವಾಡಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದು ನಿಜವೇ; | ಹೌದು.<br><br>ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಗೌರವಧನ ಹಾಗೂ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮಗಳು ಕೇಂದ್ರ ಪುರಸ್ಕೃತ ಯೋಜನೆಯಾಗಿರುವುದರಿಂದ ಕಡ್ಡಾಯವಾಗಿ ಪಿ.ಎಫ್.ಎಂ.ಎಸ್. ತಂತ್ರಾಂಶದಲ್ಲಿಯೇ ಅನುಷ್ಠಾನಗೊಳಿಸುವಂತೆ ಸೂಚಿಸಲಾಗಿರುತ್ತದೆ.<br><br>ಆದರೆ 2022-23ನೇ ಸಾಲಿನ ಆಯವ್ಯಯ ಸಂಪುಟಗಳಲ್ಲಿ ಪ್ರಸ್ತಾಪಿತ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಅನುದಾನವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗೆ ಅನುಗುಣವಾಗಿ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನವನ್ನು ಪ್ರತ್ಯೇಕಿಸಿ 2022-23ನೇ ಸಾಲಿನ ಪೂರಕ ಅಂದಾಜು-1ನೇ ಕಂತಿನಲ್ಲಿ ನಿಗದಿಪಡಿಸಿದ್ದು, ಸದರಿ ಮೊತ್ತವನ್ನು ವಿನಿಯೋಗಿಸಲು ಅನುವಾಗುವಂತೆ ಆರ್ಥಿಕ ಇಲಾಖೆಯು ದಿನಾಂಕ: 19-10-2022ರ ಪತ್ರದಲ್ಲಿ ಅನುಮತಿ ನೀಡಲಾಗಿರುತ್ತದೆ.<br><br>ಅದರಂತೆ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನವನ್ನು ಪ್ರತ್ಯೇಕಿಸಿ ತಾಲ್ಲೂಕುವಾರು ಹೊಸ ಲೆಕ್ಕ ಶೀರ್ಷಿಕೆಯಡಿ ಪ್ರಸ್ತಾಪಿತ ಕಾರ್ಯಕ್ರಮಗಳಡಿ ಮರುಹಂಚಿಕೆಗೊಳಿಸಿ ಖಜಾನೆ-2 ತಂತ್ರಾಂಶದಲ್ಲಿ ಅಳವಡಿಸಿ ಬಿಡುಗಡೆಗೊಳಿಸಲು ವಿಳಂಬವಾಗಿರುತ್ತದೆ. ಪ್ರಸ್ತುತ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಗೌರವಧನ, ಮೊಟ್ಟೆ ಖರೀದಿ ಹಾಗೂ ತರಕಾರಿ ಖರೀದಿಗೆ ಸಂಬಂಧಿಸಿದಂತೆ ಡಿಸೆಂಬರ್-2022ರ ಅಂತ್ಯದವರೆಗೆ ಅನುದಾನ ವನ್ನು ಬಿಡುಗಡೆಗೊಳಿಸಲಾಗಿರುತ್ತದೆ. |

| | | |
|---|---|---|
| ಆ. | ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ನೀಡಬೇಕಾದ ಅಂಗನವಾಡಿಗಳು ಸಹಾಯಧನದ ಸೌಲಭ್ಯ ಕೊರತೆ ಮಕ್ಕಳ ಮತ್ತು ಗರ್ಭಿಣಿಯರು ತೊಂದರೆಯಾಗಿರುವುದು ಸರ್ಕಾರಕ್ಕೆ ತಿಳಿದಿದೆಯೇ; | ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮದಡಿ ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ಪೌಷ್ಠಿಕ ಆಹಾರವನ್ನು ನಿಯಮಿತವಾಗಿ ವಿತರಿಸಲಾಗುತ್ತಿದೆ. ಆದರೆ ಕೆಲವು ಆಡಳಿತಾತ್ಮಕ ಮತ್ತು ತಾಂತ್ರಿಕ ಕಾರಣಗಳ ಹಿನ್ನೆಲೆಯಲ್ಲಿ ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ವಿತರಿಸುವ ಕೋಳಿಮೊಟ್ಟೆಗೆ ಮಾತ್ರ ಅನುದಾನ ಪಾವತಿ ವಿಳಂಬವಾಗಿರುತ್ತದೆ. ಆದರೆ ಆಹಾರ ವಿತರಣೆಯಲ್ಲಿ ಯಾವುದೇ ವ್ಯತ್ಯಯ ಉಂಟಾಗಿರುವುದಿಲ್ಲ. |
| ಇ. | ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯಾದಾಗ ಅಂಗನವಾಡಿ ಕಾರ್ಯಕರ್ತೆಯರು ಬಹುಮುಖ್ಯ ಪಾತ್ರ ವಹಿಸಬೇಕಾದಾಗ ಅವರಿಗೆ ಬೇಕಾದ ಸೂಕ್ತ ತರಬೇತಿ, ಸಂಬಳ ಗ್ರಾಚ್ಯೂಟಿ ಮುಂತಾದ ಸೌಲಭ್ಯಗಳ ಕುರಿತು ಸರ್ಕಾರ ನಿರ್ಧಾರ ಕೈಗೊಳ್ಳುವುದೇ? | ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯಾದಾಗ ಅಂಗನವಾಡಿ ಕಾರ್ಯಕರ್ತೆಯರಿಗೆ ರಾಷ್ಟ್ರೀಯ ಶಿಕ್ಷಣ ನೀತಿ-2020 ರ ಮಾರ್ಗಸೂಚಿಗಳನ್ವಯ ಹಂತ ಹಂತವಾಗಿ ತರಬೇತಿ ನೀಡಲಾಗುವುದು. ಅಂಗನವಾಡಿ ಕಾರ್ಯಕರ್ತೆಯರಿಗೆ ಗ್ರಾಚ್ಯುಟಿ ಸೌಲಭ್ಯಗಳನ್ನು ಒದಗಿಸುವ ಕುರಿತು ಕೇಂದ್ರ ಸರ್ಕಾರದ ಸ್ಪಷ್ಟೀಕರಣ ಕೋರಲಾಗಿದೆ. ಸ್ಪಷ್ಟೀಕರಣ ಬಂದ ನಂತರ ನಿಯಾಮಾನುಸಾರ ಕ್ರಮವಹಿಸಲಾಗುವುದು. |

**ಸಂಖ್ಯೆ:ಮಮಇ 368 ಐಸಿಡಿ 2022**

Halappa BA

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು